ಸಮಾಜದ ಮುಖ್ಯವಾಹಿನಿಗೆ ತರಲು ಅವಶ್ಯವಿರುವ ಅಂಶಗಳನ್ನು ಅಧ್ಯಯನ ಮಾಡಿ ಪರಿಹಾರೋಪಾಯಗಳನ್ನು ಸೂಚಿಸಲು ರಾಷ್ಟ್ರೀಯ ಕಾನೂನು ಶಾಲೆಯಲ್ಲಿ ತಳಸಮುದಾಯಗಳ ಅಧ್ಯಯನ ಕೇಂದ್ರವನ್ನು ತೆರೆಯಲು ₹ 1.00 ಕೋಟಿ ಅನುದಾನವನ್ನು ನಿಗದಿಪಡಿಸಲಾಗುವುದೆಂದು ಘೋಷಿಸಲಾಗಿದೆ. ಅದರಂತೆ ಅಧ್ಯಯನ ಕೇಂದ್ರವನ್ನು ತೆರೆಯಲು ಹಾಗೂ ಅನುದಾನವನ್ನು ಬಿಡುಗಡೆ ಮಾಡುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ.

ಆಸ್ಪತ್ರೆಗಳನ್ನು ಮೇಲ್ದರ್ಜೆಗೆ ಏರಿಸುವುದು

3837(4749); ಶ್ರೀ ಡಾ॥ ಗುರುಪಾದಪ್ಪ ನಾಗಮಾರಪಳ್ಳಿ (ಬೀದರ್)

ಅ) ಹೈದ್ರಾಬಾದ್ ಕರ್ನಾಟಕ ಪ್ರದೇಶದ ವ್ಯಾಪ್ತಿಯಲ್ಲಿ ಬರುವ ವಿವಿಧ ಜಿಲ್ಲೆಗಳಲ್ಲಿ ಇರುವ ಸರ್ಕಾರಿ ಆಸ್ಪತ್ರೆಗಳ ಮತ್ತು ಆರೋಗ್ಯ ಕೇಂದ್ರ ಮತ್ತು ಘಟಕಗಳ ಸಂಖ್ಯೆ ಎಷ್ಟು; ಇವುಗಳ ಹಾಸಿಗೆ ಸಾಮರ್ಥ್ಯವೆಷ್ಟು; (ವಿಧಾನ ಸಭಾ ಕ್ಷೇತ್ರವಾರು ಅಂಕಿ ಅಂಶಗಳನ್ನು ಒದಗಿಸುವುದು);

ಆ) ಇಲ್ಲಿಗೆ ಬರುವ ರೋಗಿಗಳ ಸಂಖ್ಯೆಗೆ ಅನುಗುಣವಾಗಿ ಮತ್ತು ಉತ್ತಮ ಸೇವೆಯನ್ನು ಒದಗಿಸುವ ದೃಷ್ಟಿಯಿಂದ ಯಾವ ಯಾವ ಆಸ್ಪತ್ರೆಗಳನ್ನು ಮತ್ತು ಆರೋಗ್ಯ ಕೇಂದ್ರ ಮತ್ತು ಘಟಕಗಳನ್ನು ಮೇಲ್ದರ್ಜೆಗೇರಿಸಲಾಗುವುದು ಮತ್ತು ಎಷ್ಟು ಪ್ರಮಾಣದಲ್ಲಿ ಹಾಸಿಗೆಗಳ ಸಾಮರ್ಥ್ಯವನ್ನು ಹೆಚ್ಚಿಸಲಾಗುವುದು;

ಇ) ಇದಕ್ಕಾಗಿ ಪ್ರಸಕ್ತ ಆಯವ್ಯಯದಲ್ಲಿ ಎಷ್ಟು ಹಣವನ್ನು ವೆಚ್ಚ ಮಾಡಲಾಗುವುದು?

ಶ್ರೀ ಯು.ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಹೈದ್ರಾಬಾದ್–ಕರ್ನಾಟಕ ಪ್ರದೇಶದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಒಟ್ಟು 6 ಜಿಲ್ಲಾ ಆಸ್ಪತ್ರೆಗಳು, 25 ತಾಲ್ಲೂಕು ಮಟ್ಟದ ಸಾರ್ವಜನಿಕ ಆಸ್ಪತ್ರೆಗಳು, 56 ಸಮುದಾಯ

ಆರೋಗ್ಯ ಕೇಂದ್ರಗಳು ಮತ್ತು 316 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದೆ. ಅವುಗಳ ಜಿಲ್ಲಾವಾರು ವಿವರ ಕೆಳಕಂಡಂತಿರುತ್ತದೆ.

ಆಸ್ಪತ್ರೆಗಳ ಹಾಸಿಗೆ ಸಾಮರ್ಥ್ಯ ಈ ಕೆಳಕಂಡಂತಿರುತ್ತದೆ.

ಜಿಲ್ಲಾ ಆಸ್ಪತ್ರೆಯಲ್ಲಿ 250 ಹಾಸಿಗೆಯ ಮತ್ತು ಮೇಲ್ಪಟ್ಟು ಹಾಸಿಗೆಯ ಸಾಮರ್ಥ್ಯವನ್ನು ಒದಗಿಸಲಾಗಿದೆ.

ಸಾರ್ವಜನಿಕ ಆಸ್ಪತ್ರೆಗಳಲ್ಲಿ 100 ಹಾಸಿಗೆಯ ಮತ್ತು ಮೇಲ್ಪಟ್ಟು ಹಾಸಿಗೆಯ ಸಾಮರ್ಥ್ಯವನ್ನು ಒದಗಿಸಲಾಗಿದೆ.

ಸಮುದಾಯ ಆರೋಗ್ಯ ಕೇಂದ್ರಗಳ 30 ಹಾಸಿಗೆಯ ಮತ್ತು ಮೇಲ್ಪಟ್ಟು ಹಾಸಿಗೆಯ ಸಾಮರ್ಥ್ಯವನ್ನು ಒದಗಿಸಲಾಗಿದೆ.

ಪ್ರಾಥಮಿಕ ಆರೋಗ್ಯ ಕೇಂದ್ರಗಳು 6 ಹಾಸಿಗೆಯ ಮತ್ತು ಹೆರಿಗೆ ವಾರ್ಡ ಇರುವಲ್ಲಿ 10 ಹಾಸಿಗೆಯ ಸಾಮರ್ಥ್ಯವನ್ನು ಒದಗಿಸಲಾಗಿದೆ.

ಕ್ರ.ಸಂ	ಜಿಲ್ಲೆಗಳ ಹೆಸರು	ಪ್ರಾ.ಆ.ಕೇಂ	ಸ.ಆ.ಕೇ.	ತಾಲ್ಲೂಕು ಮಟ್ಟದ ಅಸ್ಪತ್ರೆಗಳು	ಜಿಲ್ಲಾ ಆಸ್ಪತ್ರೆ
1	ಯಾದಗಿರಿ	42	6	2	1
2	ಕೊಪ್ಪಳ	42	9	3	1
3	ಗುಲಬರ್ಗಾ	83	16	6	1
4	ಬಳ್ಳಾರಿ	50	11	6	1
5	ಬೀದರ್	51	8	4	1
6	ರಾಯಚೂರು	48	6	4	1

ಆ) ರಾಜ್ಯದಲ್ಲಿ ಅವಶ್ಯಕತೆಗಿಂತ ಹೆಚ್ಚಿನ ಸಂಖ್ಯೆಯಲ್ಲಿ ಆಸ್ಪತ್ರೆಗಳು ಕಾರ್ಯನಿರ್ವಹಿಸುತ್ತಿದ್ದು, ಮಂಜೂರು ಮಾಡಲ್ಪಟ್ಟ /ಮೇಲ್ದರ್ಜೆಗೇರಿಸಲ್ಪಟ್ಟ ಆಸ್ಪತ್ರೆಗಳ ಹಾಸಿಗೆ ಸಾಮರ್ಥ್ಯಕ್ಕೆ

ಅನುಗುಣವಾಗಿ ಅವಶ್ಯವಿರುವ ಔಷಧಿಗಳನ್ನು ಪೂರೈಸಲಾಗುತ್ತಿದ್ದು, ಅವುಗಳಿಗೆ ಖಾಯಂ ಕಟ್ಟಡಗಳನ್ನು ಮತ್ತು ಸಿಬ್ಬಂದಿಯನ್ನು ನಿಗದಿತ ಮಟ್ಟಕ್ಕೆ ಒದಗಿಸಲಾಗಿಲ್ಲ. ಅಲ್ಲದೇ ಈಗಾಗಲೇ ಸ್ಥಾಪಿಸಿರುವ ಸಮುದಾಯ ಆರೋಗ್ಯ ಕೇಂದ್ರ ಮತ್ತು ಮೇಲ್ಪಟ್ಟ ಆಸ್ಪತ್ರೆಗಳಿಗೆ ತಜ್ಞ ವೈದ್ಯರ ಅವಶ್ಯಕತೆ ಇರುವುದರಿಂದ ಈ ಕೊರತೆ ನಿವಾರಿಸಲು ಪ್ರಥಮ ಆದ್ಯತೆ ನೀಡಿ ತದನಂತರ ಹೊಸ ಆಸ್ಪತ್ರೆ ಮಂಜೂರಾತಿ/ಮೇಲ್ದರ್ಜೆಗೇರಿಸುವ ಬಗೆ ಚಿಂತನೆ ಮಾಡಲಾಗುತ್ತಿದೆ.

ಇ) ಅನ್ವಯಿಸುವುದಿಲ್ಲ.

ಆಸ್ಪತ್ರೆಗಳಲ್ಲಿ ಖಾಲಿ ಹುದ್ದೆಗಳು

3838(4750); ಡಾ॥ ಗುರುಪಾದಪ್ಪ ನಾಗಮಾರವಳ್ಳಿ (ಬೀದರ್)

ಅ) ಹೈದ್ರಾಬಾದ್ ಕರ್ನಾಟಕ ಪ್ರದೇಶದ ವ್ಯಾಪ್ತಿಯಲ್ಲಿ ಬರುವ ವಿವಿಧ ಜಿಲ್ಲೆಗಳಲ್ಲಿ ಇರುವ ಸರ್ಕಾರಿ ಆಸ್ಪತ್ರೆಗಳ ಮತ್ತು ಆರೋಗ್ಯ ಕೇಂದ್ರ ಮತ್ತು ಘಟಕಗಳ ಸಂಖ್ಯೆ ಎಷ್ಟು; ಮಂಜೂರಾಗಿರುವ ವೈದ್ಯರು ಹಾಗೂ ಇತರೆ ಸಿಬ್ಬಂದಿ ವರ್ಗದ ಸಂಖ್ಯೆ ಎಷ್ಟು;

ಆ) ಈ ಪೈಕಿ ಎಷ್ಟು ಹುದ್ದೆಗಳು ಭರ್ತಿಯಾಗಿವೆ; ಎಷ್ಟು ಹುದ್ದೆಗಳು ಯಾವ ಅವಧಿಯಿಂದ ಖಾಲಿಯಾಗಿವೆ; ಖಾಲಿಯಾಗಿರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದ ಮುಂದಿರುವ ಕ್ರಮಗಳೇನು;

ಇ) ಇದೇ ಅವಧಿಯಲ್ಲಿ ಈ ಎಲ್ಲಾ ಆಸ್ಪತ್ರೆಗಳಿಗೆ ಖರೀದಿಸುವ ಔಷಧಿಗಳು ಮತ್ತು ಉಪಕರಣಗಳಿಗಾಗಿ ಮಾಡಲಾದ ವೆಚ್ಚವೆಷ್ಟು (ಆಸ್ಪತ್ರೆವಾರು ವಿವರಗಳನ್ನು ಒದಗಿಸುವುದು)?

ಶ್ರೀ ಯು.ಟಿ. ಖಾದರ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಹೈದ್ರಾಬಾದ್–ಕರ್ನಾಟಕ ಪ್ರದೇಶದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಒಟ್ಟು 6 ಜಿಲ್ಲಾ ಆಸ್ಪತ್ರೆಗಳು, 25 ತಾಲ್ಲೂಕು ಮಟ್ಟದ ಚಾರ್ವಜನಿಕ ಆಸ್ಪತ್ರೆಗಳು, 56 ಸಮುದಾಯ